## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಗ್ರಾಮದಲ್ಲಿ ವೀರಶೈವ ವಿದ್ಯಾವರ್ಧಕ ಸಂಘ, ಬಳ್ಳಾರಿ ಇವರು ನಡೆಸುತ್ತಿರುವ ವಿಜಯನಗರ ಸಂಯುಕ್ತ ಪದವಿ ಪೂರ್ವ ಕಾಲೇಜು ಕಟ್ಟಡ ಇರುವ ಜಾಗವನ್ನು ದಿನಾಂಕ:01.04.1993 ರಿಂದ 30 ವರ್ಷಗಳ ಅವಧಿಗೆ ಲೀಸ್ ಆಧಾರದ ಮೇಲೆ ವಾರ್ಷಿಕ ರೂ.98,280/- ರಂತೆ ದರವನ್ನು ನಿಗಧಿಪಡಿಸಿ ವೀರಶೈವ ವಿದ್ಯಾವರ್ಧಕ ಸಂಘಕ್ಕೆ ನೀಡುವ ಬಗ್ಗೆ.

ಓದಲಾಗಿದೆ:
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ:ಕನೀನಿನಿ/ಸಿ-11/ಎಎಸ್‌ಟಿ/589/2015-16/1454 ದಿನಾಂಕ:15.06.2017. ಮತ್ತು ಪತ್ರ ಸಂಖ್ಯೆ:5988, ದಿನಾಂಕ:17.12.2019.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ: ಕನೀನಿನಿ/ಸಿ-11/ಎಎಸ್‌ಟಿ/589/2015-16/4607 ದಿನಾಂಕ: 03.10.2020. ಮತ್ತು ಪತ್ರ ಸಂಖ್ಯೆ:1514 ದಿನಾಂಕ: 05.07.2021.

******

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಡ್ಯಾಂ ಪ್ರದೇಶದ ವ್ಯಾಪ್ತಿಯಲ್ಲಿ ನೀರಾವರಿ ಇಲಾಖೆಗೆ ಸೇರಿದ ಸುಮಾರು 2.70 ಎಕರೆ ಜಾಗದಲ್ಲಿ ಪ್ರೌಢ ಶಾಲೆಯನ್ನು ಸ್ಥಾಪಿಸಲು ವೀರಶೈವ ವಿದ್ಯಾವರ್ಧಕ ಸಂಘ, ಬಳ್ಳಾರಿ ಇವರಿಗೆ 1963-64 ರಲ್ಲಿ ಅನುಮತಿ ನೀಡಲಾಗಿರುತ್ತದೆ. ವೀರಶೈವ ವಿದ್ಯಾವರ್ಧಕ ಸಂಘಕ್ಕೆ ಲೀಸ್ ಅವಧಿಯನ್ನು ಪ್ರತಿ 10 ವರ್ಷಗಳ ಅವಧಿಗೆ ನವೀಕರಿಸಲಾಗುತ್ತಿದ್ದು, ಲೀಸ್ ಅವಧಿಯು ದಿನಾಂಕ:31.03.1993 ಕ್ಕೆ ಮುಕ್ತಾಯಗೊಂಡಿರುತ್ತದೆ; ಸಂಘದ ಗುತ್ತಿಗೆ ಅವಧಿಯನ್ನು ವಿಸ್ತರಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಪ್ರಸ್ತಾಪಿಸಿರುತ್ತಾರೆ.

ಮುಂದುವರೆದು, ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಗ್ರಾಮದಲ್ಲಿ ವೀರಶೈವ ವಿದ್ಯಾವರ್ಧಕ ಸಂಘ, ಬಳ್ಳಾರಿ ಇವರು ನಡೆಸುತ್ತಿರುವ ವಿಜಯನಗರ ಸಂಯುಕ್ತ ಪದವಿ ಪೂರ್ವ ಕಾಲೇಜು ಕಟ್ಟಡ ಇರುವ ಜಾಗವನ್ನು ಮಂಜೂರು ಮಾಡುವ ಪ್ರಸ್ತಾವನೆಯನ್ನು ದಿನಾಂಕ:04.12.2019 ರಂದು ನಡೆದ ನಿಗಮದ ನಿರ್ದೇಶಕರ ಮಂಡಳಿಯ 92ನೇ ಸಭೆಯಲ್ಲಿ ಮಂಡಿಸಲಾಗಿ, ಚರ್ಚೆಯ ನಂತರ ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಗ್ರಾಮದಲ್ಲಿ ವೀರಶೈವ ವಿದ್ಯಾವರ್ಧಕ ಸಂಘ, ಬಳ್ಳಾರಿ ಇವರು ನಡೆಸುತ್ತಿರುವ ವಿಜಯನಗರ ಸಂಯುಕ್ತ ಪದವಿ ಪೂರ್ವ ಕಾಲೇಜು ಕಟ್ಟಡ ಇರುವ ಜಾಗವನ್ನು ಈಗಾಗಲೇ ಲೀಸ್ ಆಧಾರದ ಮೇಲೆ ನೀಡಿರುವಂತೆ ಮುಂದಿನ 30 ವರ್ಷಗಳ ಅವದಿಗೆ ಲೀಸ್ ಆಧಾರದ ಮೇಲೆ ಲೋಕೋಪಯೋಗಿ ಇಲಾಖೆಯವರು ನಿಗಧಿಪಡಿಸಿರುವ ಸೂಕ್ತವಾದ ದರದಂತೆ ಲೀಸ್ ಅಥವಾ ಬಾಡಿಗೆಯನ್ನು ನಿಗಧಿಪಡಿಸಿ ನೀಡಲು ಮಂಡಳಿಯು ಅನುಮೋದನೆ ನೀಡಿ, ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು ತಿಳಿಸುತ್ತಾ, ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಗ್ರಾಮದಲ್ಲಿ ವೀರಶೈವ ವಿದ್ಯಾವರ್ಧಕ ಸಂಘ, ಬಳ್ಳಾರಿ ಇವರು ನಡೆಸುತ್ತಿರುವ ವಿಜಯನಗರ ಸಂಯುಕ್ತ ಪದವಿ ಪೂರ್ವ ಕಾಲೇಜು ಕಟ್ಟಡ ಇರುವ ಜಾಗವನ್ನು 30 ವರ್ಷಗಳ ಅವಧಿಗೆ ಲೀಸ್ ಆಧಾರದ ಮೇಲೆ ವಾರ್ಷಿಕ ರೂ.98,280/- ರಂತೆ ನಿಗಧಿಪಡಿಸಿ ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

..2..

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 25 ಎಂಟಿಪಿ 2021,**
**ಬೆಂಗಳೂರು, ದಿನಾಂಕ:26.10.2021**

ಕೊಪ್ಪಳ ತಾಲ್ಲೂಕಿನ ಮುನಿರಾಬಾದ್ ಗ್ರಾಮದಲ್ಲಿ ವೀರಶೈವ ವಿದ್ಯಾವರ್ಧಕ ಸಂಘ, ಬಳ್ಳಾರಿ ಇವರು ನಡೆಸುತ್ತಿರುವ ವಿಜಯನಗರ ಸಂಯುಕ್ತ ಪದವಿ ಪೂರ್ವ ಕಾಲೇಜು ಕಟ್ಟಡ ಇರುವ ಜಾಗವನ್ನು ದಿನಾಂಕ:01.04.1993 ರಿಂದ 30 ವರ್ಷಗಳ ಅವಧಿಗೆ ಲೀಸ್ ಆಧಾರದ ಮೇಲೆ ವಾರ್ಷಿಕ ರೂ.98,280/- ರಂತೆ(ರೂಪಾಯಿ ತೊಂಭತ್ತೆಂಟು ಸಾವಿರದ ಇನ್ನೂರ ಎಂಭತ್ತು ಮಾತ್ರ) ದರವನ್ನು ನಿಗಧಿಪಡಿಸಿ ವೀರಶೈವ ವಿದ್ಯಾವರ್ಧಕ ಸಂಘಕ್ಕೆ ನೀಡಲು ಅನುಮೋದನೆ ನೀಡಲಾಗಿದೆ.

ಈ ಆದೇಶವು ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು 1977'ರ 17ನೇ ನಿಯಮದ (2ನೇ) ಉಪನಿಯಮದ ಪರಂತುಕದ ವ್ಯಾಪ್ತಿಯೊಳಗೆ ಬರುತ್ತದೆ ಮತ್ತು ಅದರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Shubha K 26/10/2021
(ಶುಭಾ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)(ಪ್ರ)
ಜಲಸಂಪನ್ಮೂಲ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ) ವಿಧಾನಸೌಧ. (ಸಚಿವ ಸಂಪುಟ ಪ್ರಕರಣ ಸಂಖ್ಯೆ:ಸಿ: 378/2021 ದಿನಾಂಕ: 20.09.2021 ರ ಮೇರೆಗೆ)
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ನೀರಾವರಿ ಕೇಂದ್ರ ವಲಯ, ಮುನಿರಾಬಾದ್.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
9. ಸರ್ಕಾರದ ಕಾರ್ಯದರ್ಶಿ ಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
10. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜಲಸಂಪನ್ಮೂಲ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.